# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರಗಳನ್ನು ಗುಲಬರ್ಗಾದಲ್ಲಿ ಸ್ಥಾಪಿಸುವ ಕುರಿತು.

**ಓದಲಾಗಿದೆ:**

**(1). ಸರ್ಕಾರದ ಆದೇಶದ ಸಂಖ್ಯೆ: ಗ್ರಾಅಪ 111 ತಾಪಸ 2010, ದಿನಾಂಕ: 21.10.2011**
**(2) 2013–14ನೇ ಆರ್ಥಿಕ ಸಾಲಿನ ಆಯವ್ಯಯ ಭಾಷಣದಲ್ಲಿ ಪ್ರಸ್ತಾಪಿಸಿರುವ ಅಂಶಗಳು.**

ಪ್ರಸ್ತಾವನೆ.

ಭಾರತದ ಸಂವಿಧಾನಕ್ಕೆ ಮಾಡಲಾದ 73ನೇ ತಿದ್ದುಪಡಿಯ ಆಶಯದಂತೆ ಪಂಚಾಯತ್ ರಾಜ್ ಅಥವಾ ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆಯನ್ನು ಜಾರಿಗೆ ತರುವಲ್ಲಿ ಕರ್ನಾಟಕ ರಾಜ್ಯವು ಮುಂಚೂಣಿಯಲ್ಲಿದೆ. ಪಂಚಾಯತ್ ರಾಜ್ ವ್ಯವಸ್ಥೆಯಡಿ ಕರ್ನಾಟಕದಲ್ಲಿ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳನ್ನು ಸ್ಥಾಪಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ 30 ಜಿಲ್ಲಾ ಪಂಚಾಯತಿಗಳು, ತಾಲ್ಲೂಕು ಮಟ್ಟದಲ್ಲಿ 176 ತಾಲ್ಲೂಕು ಪಂಚಾಯತಿಗಳು ಹಾಗು ತಳ ಮಟ್ಟದಲ್ಲಿ 5627 ಗ್ರಾಮ ಪಂಚಾಯತಿಗಳು ಅಧಿಕಾರವನ್ನು ಹಂಚುವ ಕೆಲಸವನ್ನು ಮಾಡುತ್ತಿವೆ. ಜಿಲ್ಲಾ ಪಂಚಾಯತಿಗಳಿಂದ 1013, ತಾಲ್ಲೂಕು ಪಂಚಾಯತಿಗಳಿಂದ 3659 ಹಾಗು ಗ್ರಾಮ ಪಂಚಾಯತಿಗಳಿಂದ 90635 ಚುನಾಯಿತ ಪ್ರತಿನಿಧಿಗಳು ಆಯ್ಕೆಯಾಗಿದ್ದು ಮೂರು ಹಂತದ ಪಂಚಾಯತ್ ಸಂಸ್ಥೆಗಳಿಂದ ಒಟ್ಟು ಚುನಾಯಿತ ಪ್ರತಿನಿಧಿಗಳ ಸಂಖ್ಯೆ 95307. ಈ ಪೈಕಿ ಮಹಿಳಾ ಚುನಾಯಿತ ಪ್ರತಿನಿಧಿಗಳ ಸಂಖ್ಯೆ 41577, ಪ.ಜಾತಿ ಮತ್ತು ಪ.ಪಂಗಡದ ಚುನಾಯಿತ ಪ್ರತಿನಿಧಿಗಳ ಸಂಖ್ಯೆ 27998 ಹಾಗು ಅಲ್ಪಸಂಖ್ಯಾತ ಚುನಾಯಿತ ಪ್ರತಿನಿಧಿಗಳ ಸಂಖ್ಯೆ 6176 ಆಗಿರುತ್ತದೆ. ಈ ಚುನಾಯಿತ ಪ್ರತಿನಿಧಿಗಳು ಪಂಚಾಯತ್ ರಾಜ್ ವ್ಯವಸ್ಥೆಯಡಿ ತಮ್ಮನ್ನು ತಾವು ಸಕ್ರಿಯರನ್ನಾಗಿಸಿಕೊಂಡಿದ್ದಾರೆ. ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳ ಕಾರ್ಯವ್ಯಾಪ್ತಿಗೆ ತರಲಾಗಿರುವ 29 ವಿಷಯಗಳ ಎಲ್ಲಾ ಇಲಾಖೆಗಳಲ್ಲಿ ಅಂದಾಜು 3.50 ಲಕ್ಷಗಳಷ್ಟು ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ. ಕರ್ನಾಟಕದ ಮೂರು ಹಂತದ ಪಂಚಾಯತ್ ಸಂಸ್ಥೆಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಾಗು ಹಲವು ಬಾಹ್ಯ ನೆರವುಗಳ ಮೂಲಕ ವ್ಯಾಪಕವಾದ ಅನುದಾನಗಳನ್ನು ವರ್ಗಾಯಿಸಲಾಗುತ್ತಿದೆ. ಅಂತೆಯೇ ಮೂರು ಹಂತದ ಪಂಚಾಯತ್ ಸಂಸ್ಥೆಗಳಿಗೆ ಅಧಿಕ ಸಂಖ್ಯೆಯಲ್ಲಿ ಹಲವು ಹುದ್ದೆಗಳನ್ನು ಸೃಜಿಸಿ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಅನುವು ಮಾಡಿಕೊಡಲಾಗುತ್ತಿದೆ. ಸಂವಿಧಾನದತ್ತವಾಗಿ ಪಂಚಾಯತ್ ಸಂಸ್ಥೆಗಳಿಗೆ 29 ವಿಷಯಗಳ ಅನುಷ್ಠಾನ ಮತ್ತು ಮೇಲುಸ್ತುವಾರಿ ಜವಾಬ್ದಾರಿಯನ್ನು ವಹಿಸಲಾಗಿದೆ. ಕರ್ನಾಟಕದ ಪಂಚಾಯತ್ ರಾಜ್ ವ್ಯವಸ್ಥೆಯಡಿ ಅಗಾಧ ಸಂಖ್ಯೆಯಲ್ಲಿ ತೊಡಗಿಸಿಕೊಂಡಿರುವ ವಿವಿಧ ಹಂತಗಳ ಭಾಗೀದಾರರ ನೆರವಿನಿಂದ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು ಒಳಗೊಂಡಂತೆ ಪಂಚಾಯತ್ ರಾಜ್ ವಿಷಯಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ. ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ತೊಡಗಿಸಿಕೊಂಡಿರುವ ವಿವಿಧ ಹಂತಗಳ ಭಾಗೀದಾರರ ಕಾರ್ಯನಿರ್ವಹಣೆ ಸಾಮರ್ಥ್ಯವನ್ನು ವೃದ್ಧಿಸಿ ಆ ಮೂಲಕ ಅವರುಗಳ ಸೇವೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಬಳಸಿಕೊಳ್ಳುವ ಹಾಗು ನಿರೀಕ್ಷಿತ ಫಲಶೃತಿಗಳನ್ನು ಪಡೆಯುವ ನಿಟ್ಟಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನದಲ್ಲಿ ಮೈಸೂರಿನಲ್ಲಿ ಅಬ್ದುಲ್ ನಜೀರ್

ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯನ್ನು ಸ್ಥಾಪಿಸಲಾಗಿದೆ. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯು ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಪ್ರತ್ಯಕ್ಷ ಮತ್ತು ಪರೋಕ್ಷವಾಗಿ ತೊಡಗಿಸಿಕೊಂಡಿರುವ ಎಲ್ಲಾ ಭಾಗೀದಾರರಿಗೆ ಮುಖಾಮುಖಿ ಮತ್ತು ಉಪಗ್ರಹ ಆಧಾರಿತ ವಿಧಾನಗಳ ಮೂಲಕ ವಿವಿಧ ತರಬೇತಿ ಅಥವಾ ಸಾಮರ್ಥ್ಯಾಭಿವೃದ್ಧಿ ಕಾರ್ಯಕ್ರಮಗಳನ್ನು ಹಲವು ಹಂತಗಳಲ್ಲಿ ಅನುಷ್ಠಾನಗೊಳಿಸುವ ಕಾರ್ಯವನ್ನು ನಿರ್ವಹಿಸುತ್ತಿದೆ. ರಾಜ್ಯದ ಪ್ರತಿ ತಾಲ್ಲೂಕು ಕೇಂದ್ರಗಳಲ್ಲಿ ತರಬೇತಿ ಕಾರ್ಯಕ್ರಮಗಳ ಅನುಷ್ಠಾನ ಉದ್ದೇಶಕ್ಕಾಗಿ ಸಾಮರ್ಥ್ಯ ಸೌಧಗಳನ್ನು ನಿರ್ಮಾಣ ಮಾಡಲಾಗಿದೆ. ಪಂಚಾಯತ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳು ಮತ್ತು ಅಧಿಕಾರಿಗಳು/ನೌಕರರಿಗೆ ಮುಖಾಮುಖಿ ತರಬೇತಿಗಳನ್ನು ಕೈಗೊಳ್ಳುವ ಅಗತ್ಯವನ್ನು ಮನಗಾಣಲಾಗಿದೆ. ಇದು ಸಮುದಾಯ ಪಾಲ್ಗೊಳ್ಳುವಿಕೆಯಲ್ಲಿ ನಿರೀಕ್ಷಿತ ಫಲಿತಾಂಶವನ್ನು ತಂದುಕೊಡಬಲ್ಲದು.

ವ್ಯಾಪಕವಾಗಿರುವ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಕಾರ್ಯನಿರ್ವಹಣೆ ಒತ್ತಡವನ್ನು ಕಡಿಮೆ ಮಾಡಲು ಹಾಗು ಈ ಸಂಸ್ಥೆಯ ಚಟುವಟಿಕೆಗಳನ್ನು ವಿಕೇಂದ್ರೀಕರಿಸಲು ಪೂರಕವಾಗಿ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರವನ್ನು ಓದಲಾದ (1)ರ ಸರ್ಕಾರದ ಆದೇಶದ ಮೂಲಕ ಧಾರವಾಡದಲ್ಲಿ ಸ್ಥಾಪಿಸಲಾಗಿದೆ. ಈ ಪ್ರಾದೇಶಿಕ ತರಬೇತಿ ಕೇಂದ್ರಕ್ಕೆ ನಿರ್ದಿಷ್ಟ ಕರ್ತವ್ಯಗಳನ್ನು ನಿಗಧಿಪಡಿಸಿ ಹಲವು ಹುದ್ದೆಗಳನ್ನು ಸಹ ಸೃಜಿಸಲಾಗಿದೆ.

2013-14ನೇ ಆರ್ಥಿಕ ಸಾಲಿನ ಆಯವ್ಯಯ ಭಾಷಣದಲ್ಲಿ " ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳು ಹಾಗು ಸಿಬ್ಬಂದಿಗಳಲ್ಲಿ ಗ್ರಾಮೀಣ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಜಾಗೃತಿ ಮೂಡಿಸುವ ಹಾಗು ಪರಿಣಾಮಕಾರಿಯಾಗಿ ತರಬೇತಿಯನ್ನು ನೀಡುವ ಸಲುವಾಗಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರಗಳನ್ನು ಗುಲಬರ್ಗಾದಲ್ಲಿ ಸ್ಥಾಪಿಸಲಾಗುವುದು" ಎಂದು ಘೋಷಿಸಿರುತ್ತಾರೆ.

ಕರ್ನಾಟಕದ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಪ್ರತ್ಯಕ್ಷ ಹಾಗು ಪರೋಕ್ಷವಾಗಿ ತೊಡಗಿಸಿಕೊಂಡಿರುವ ಎಲ್ಲಾ ಪಂಚಾಯತ್ ಸಂಸ್ಥೆಗಳ ಹಂತದಲ್ಲಿ ಉತ್ತಮ ಆಡಳಿತ ನೀಡಲು ಸಶಕ್ತರಾಗಿ ಮಾಡಲು, ವಿಭಿನ್ನ ಯೋಜನೆಗಳ ಅನುಷ್ಠಾನವನ್ನು ಪರಿಣಾಮಕಾರಿಯಾಗಿ ಜನರನ್ನು ತಲುಪುವಂತೆ ಮಾಡಲು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ಯೋಜನೆಗಳಲ್ಲಿ ಪಾರದರ್ಶಕತೆಯನ್ನು ತರಲು ಮತ್ತು ಗ್ರಾಮೀಣ ಜನರ ಜೀವನ ಮಟ್ಟವನ್ನು ಉನ್ನತೀಕರಿಸಲು ಹೆಚ್ಚಿನ ಅವಕಾಶಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಯೋಜಿಸಿ ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರಗಳನ್ನು ಈಗಾಗಲೇ ಧಾರವಾಡದಲ್ಲಿ ಸ್ಥಾಪಿಸಿರುವ ಪ್ರಾದೇಶಿಕ ಕೇಂದ್ರದ ಮಾದರಿಯಲ್ಲಿಯೇ ರಾಜ್ಯದ ಗುಲಬರ್ಗಾದಲ್ಲಿ ಅಗತ್ಯ ಅಧಿಕಾರಿಗಳು/ಸಿಬ್ಬಂದಿಗಳ ಸೃಜನೆಯೊಂದಿಗೆ ಸ್ಥಾಪಿಸಲು ಉದ್ದೇಶಿಸಲಾಗಿದೆ. ಅದಕ್ಕಾಗಿ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 81 ತಾಪಸ 2013, ಬೆಂಗಳೂರು, ದಿನಾಂಕ:12.11.2013**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತಂದುಕೊಳ್ಳುತ್ತಾ, ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರಗಳನ್ನು ರಾಜ್ಯದ ಗುಲಬರ್ಗಾದಲ್ಲಿ ಈ ಕೆಳಕಂಡ ಹುದ್ದೆಗಳ ಸೃಜನೆಯೊಂದಿಗೆ ಸ್ಥಾಪಿಸಲು ಅನುಮೋದನೆ ನೀಡಲಾಗಿದೆ.

1. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರ, ಗುಲಬರ್ಗಾ

| ಕ್ರ ಸಂ. | ಹುದ್ದೆಯ ಹೆಸರು | ವೇತನ ಶ್ರೇಣಿ ರೂ. ಗಳಲ್ಲಿ | ನೇಮಕಾತಿ ವಿಧಾನ | ಹುದ್ದೆಗಳ ಸಂಖ್ಯೆ |
|---|---|---|---|---|
| 1. | ಉಪ ನಿರ್ದೇಶಕರು | 28100-50100 | ಗ್ರಾ.ಅ&ಪಂ.ರಾಜ್ ಇಲಾಖೆಯಿಂದ ನಿಯೋಜನೆ ಮೇರೆಗೆ | 1 |
| 2. | ಪರಿಣಿತ ಬೋಧಕರು (ಕೋರ್ ಫ್ಯಾಕಲ್ಟಿಸ್) | 22800-43200 | ನಿಯೋಜನೆ/ಹೊರಗುತ್ತಿಗೆ ಮೇರೆಗೆ | 2 |
| 3. | ಡಾಟಾ ಎಂಟ್ರಿ ಅಪರೇಟರ್/ ಸ್ಟೆನೋಗ್ರಾಫರ್ | 15000/-ಪ್ರತಿ ತಿಂಗಳಿಗೆ (ಕ್ರೋಢೀಕೃತ ವೇತನ) | ನಿಯೋಜನೆ/ಹೊರಗುತ್ತಿಗೆ ಮೇರೆಗೆ | 1 |
| 4. | ಆಡಳಿತ ಹಾಗೂ ಲೆಕ್ಕಾಧಿಕಾರಿ | 20000-36300 | ನಿಯೋಜನೆ/ ಹೊರಗುತ್ತಿಗೆ ಮೇರೆಗೆ | 1 |
| 5. | ಕಚೇರಿ ಸಹಾಯಕರು ಕಂ ಟೈಪಿಸ್ಟ್ | 14550-26700 | ನಿಯೋಜನೆ/ಹೊರಗುತ್ತಿಗೆ ಮೇರೆಗೆ | 2 |
| 6. | ಗ್ರೂಪ್ 'ಡಿ' | 7000/- ಪ್ರತಿ ತಿಂಗಳಿಗೆ (ಕ್ರೋಢೀಕೃತ ವೇತನ) | ಹೊರಗುತ್ತಿಗೆ ಮೇರೆಗೆ | 1 |

ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಗುಲಬರ್ಗಾ ಪ್ರಾದೇಶಿಕ ತರಬೇತಿ ಕೇಂದ್ರ ಸ್ಥಾಪನೆ ಹಾಗೂ ಕಾರ್ಯನಿರ್ವಹಣೆಗೆ ಬೇಕಾಗುವ ಆವರ್ತಕ ವೆಚ್ಚಗಳನ್ನು 2013-14ನೇ ಆರ್ಥಿಕ ಸಾಲಿನಿಂದ ಲೆಕ್ಕ ಶೀರ್ಷಿಕೆ 2515-00-102-0-08(ಯೋಜನೆ) ಅಡಿಯಲ್ಲಿ ಒದಗಿಸಿರುವ ಅನುದಾನದಿಂದ ವೆಚ್ಚ ಭರಿಸುವುದು.

ಈ ಆದೇಶವನ್ನು ಅನುಷ್ಠಾನಗೊಳಿಸುವ ಸಂಬಂಧ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು ಅಗತ್ಯ ಕ್ರಮವಹಿಸತಕ್ಕದ್ದು. ಗುಲಬರ್ಗಾ ಪ್ರಾದೇಶಿಕ ತರಬೇತಿ ಕೇಂದ್ರ ನಿರ್ದೇಶಕರು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು ಇದರ ಆಡಳಿತ ನಿಯಂತ್ರಣದಲ್ಲಿ ಕಾರ್ಯನಿರ್ವಹಿಸುವುದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿ.ಡಿ. 55 ಡಿ.ಪಿ.ಡಿ. 2013 ಹಾಗು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್.ಡಿ. 325 ವೆಚ್ಚ-6/2013 ದಿನಾಂಕ: 23-10-2013 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ-
ಮತ್ತು ಅವರ ಹೆಸರಿನಲ್ಲಿ

12/11/13

(ಎಲ್.ಸಿ. ಬಸವರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

12/11

ಇವರಿಗೆ;

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.

3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸನ್ಮಾನ್ಯ ಮುಖ್ಯ ಮಂತ್ರಿಗಳ ಸಚಿವಾಲಯ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
5. ಮಹಾನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು.
6. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು.
8. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9. ಜಿಲ್ಲಾ ಖಜಾನಾಧಿಕಾರಿ, ಗುಲಬರ್ಗಾ ಮತ್ತು ಮಂಗಳೂರು ಜಿಲ್ಲೆಗಳು.
10. ಎಲ್ಲಾ ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ಅಪರ ಕಾರ್ಯದರ್ಶಿ(ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ಉಪ ಕಾರ್ಯದರ್ಶಿ(ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
14. ಆರ್ಥಿಕ ಇಲಾಖೆ (ವೆಚ್ಚ-6), ಬೆಂಗಳೂರು.
15. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
16. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
17. ಕರ್ನಾಟಕ ವಿಕಾಸ / ವೆಬ್‌ಸೈಟ್
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.